ಪ್ರತಿಲಿಪಿ

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ ನಮೋಶಿ(ಶಿಕ್ಷಕರ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 776 (810) |
| ಉತ್ತರಿಸುವ ಸಚಿವರು | : | ಮಾನ್ಯ ಕೈಮಗ್ಗ ಮತ್ತು ಜವಳಿ, ಸಕ್ಕರೆ ಹಾಗೂ ಕಬ್ಬು ಅಭಿವೃದ್ಧಿ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 20-09-2022 |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಕೈಮಗ್ಗ ಮತ್ತು ಜವಳಿ ಇಲಾಖೆಯಲ್ಲಿ ಜಾರಿಯಲ್ಲಿರುವ ಯೋಜನೆಗಳು ಯಾವುವು; (ವಿವರ ನೀಡುವುದು) | ಕೈಮಗ್ಗ ಮತ್ತು ಜವಳಿ ಇಲಾಖೆಯಲ್ಲಿ ಜಾರಿಯಲ್ಲಿರುವ ಯೋಜನೆಗಳ ವಿವರ ಈ ಕೆಳಕಂಡಂತಿರುತ್ತದೆ:-<br><br>(ಅ) ನೇಕಾರರ ಪ್ಯಾಕೇಜ್ - ಕೈಮಗ್ಗ ಮತ್ತು ಜವಳಿ ಯೋಜನೆಗಳು.<br>1. ನೇಕಾರ ಸಮ್ಮಾನ್ ಯೋಜನೆಯಡಿ ಪ್ರತಿ ವರ್ಷ ರೂ.5000/-ಗಳನ್ನು ನೇರವಾಗಿ DBT ಮುಖಾಂತರ ಕೈಮಗ್ಗ ನೇಕಾರರಿಗೆ ಪಾವತಿಸಲಾಗುವುದು.<br>2. ಕೈಮಗ್ಗ ನೇಕಾರರಿಗೆ ತರಬೇತಿ (ಸ್ಟೈಫಂಡ್).<br>3. ಮೃತ ನೇಕಾರರ (ಕೈಮಗ್ಗ) ಅಂತ್ಯ ಸಂಸ್ಕಾರದ ವೆಚ್ಚ ಮರುಪಾವತಿ.<br>4. ನಬಾರ್ಡ್ ಪುನರ್‌ಧನ ಯೋಜನೆಯಡಿ ಬಡ್ಡಿ ಸಹಾಯಧನ.<br>5. ಮಿತವ್ಯಯ ನಿಧಿ ಯೋಜನೆ.<br>6. ಸಹಕಾರ ಬ್ಯಾಂಕ್‌ಗಳು ನೀಡಿದ 1 % ಮತ್ತು 3% ಸಾಲದ ಮೇಲೆ ಬಡ್ಡಿ ಸಹಾಯಧನ.<br>7. ಕೈಮಗ್ಗ ಉತ್ಪನ್ನಗಳ ಮಾರಾಟದ ಮೇಲೆ ಶೇ.20 ರಿಬೇಟ್ ಯೋಜನೆ.<br>8. ಕೈಮಗ್ಗ ವಿಕಾಸ ಯೋಜನೆ.<br>9. ಕಚ್ಚಾಮಾಲು ಖರೀದಿ ಮೇಲೆ ಕೈಮಗ್ಗ ಸಹಕಾರ ಸಂಘಗಳಿಗೆ ಪ್ರತಿ ಕೆ.ಜಿ ಗೆ ರೂ.15/- ರ ಸಹಾಯಧನ ನೀಡುವುದು.<br>10. ಕೈಮಗ್ಗಗಳಿಗೆ ನ್ಯೂಮ್ಯಾಟಿಕ್ / ಮೋಟರೈಸ್ಡ್ ಜಕಾರ್ಡ್ ಸಲಕರಣೆಗಳ ಕಿಟ್ ಒದಗಿಸುವುದು.<br>11. 02 ವಿದ್ಯುತ್ ಮಗ್ಗ ಖರೀದಿಗೆ ಸಹಾಯಧನ.<br>12. ಎಲೆಕ್ಟ್ರಾನಿಕ್ ಜಕಾರ್ಡ್ ಖರೀದಿಗೆ ಸಹಾಯಧನ.<br>13. ಮಗ್ಗ ಪೂರ್ವ ಸೌಲಭ್ಯ<br>14. ಸೈಜಿಂಗ್ ಘಟಕ ಸ್ಥಾಪನೆ.<br>15. ಮಿನಿ ಪವರ್‌ಲೂಮ್ ಪಾರ್ಕ್ ಸ್ಥಾಪನೆಗೆ ಸಹಾಯಧನ.<br>16. ವಿದ್ಯುತ್ ರಿಯಾಯಿತಿ ಸಹಾಯಧನ (1 ರಿಂದ 20 ಹೆಚ್.ಪಿ ಘಟಕಗಳು).<br>17. 150 ಹೆಚ್.ಪಿ.ವರೆಗಿನ ಹೆಚ್.ಟಿ. ವಿದ್ಯುತ್ ಸಂಪರ್ಕ ಹೊಂದಿರುವ ರೇಪಿಯರ್/ಲಾಳಿರಹಿತ ವಿದ್ಯುತ್ ಮಗ್ಗ ಘಟಕಗಳಿಗೆ ಶೇ.50 ರಷ್ಟು ವಿದ್ಯುತ್ ಸಹಾಯಧನ ಒದಗಿಸುವುದು.<br>18. ಪ್ರೊಸೆಸ್ಸಿಂಗ್ ಘಟಕ ಸ್ಥಾಪನೆ.<br>19. ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ರಡಿ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತಿ ಸಣ್ಣ (ಎಸ್.ಎಂ.ಇ) ಘಟಕಗಳ ಸ್ಥಾಪನೆಗೆ ಸಹಾಯಧನ. |

Scanned with CamScanner

| | | |
|---|---|---|
| | | 20. ಸಹಕಾರಿ ನೂಲಿನ ಗಿರಣಿಗಳನ್ನು ಪ್ರೋತ್ಸಾಹಿಸಲು ಪ್ರತಿ ಯೂನಿಟ್ ವಿದ್ಯುತ್‌ಗೆ ರೂ.2/- ಸಹಾಯಧನ.<br><br>ಸಹಕಾರಿ ನೂಲಿನ ಗಿರಣಿಗಳು ಭಾರತೀಯ ಹತ್ತಿ ನಿಗಮ (Cotton Corporation of India)ದಿಂದ ಖರೀದಿಸಿದ ಹತ್ತಿಯ ಮೌಲ್ಯದ ಮೇಲೆ ಶೇ.5 ರಷ್ಟು ಸಹಾಯಧನ. ನೂತನ ಜವಳಿ ನೀತಿ ಯೋಜನೆಯಡಿ ಸೀವಿಂಗ್ ಮಿಷಿನ್ ಆಪರೇಟರ್/ ಕೈಮಗ್ಗ/ ವಿದ್ಯುತ್ ಮಗ್ಗ ನೇಯ್ಗೆ ತರಬೇತಿ ನೀಡಲಾಗುತ್ತಿದೆ.<br><br><u>(ಆ) ಜವಳಿ ನೀತಿ ಯೋಜನೆಗಳು:-</u><br>ಜವಳಿ ಕೈಗಾರಿಕೆಗಳನ್ನು ಉತ್ತೇಜಿಸಲು ರಾಜ್ಯದಲ್ಲಿ ಹೊಸದಾಗಿ ಸ್ಥಾಪಿಸಲ್ಪಡುವ / ವಿಸ್ತರಣ / ಆಧುನೀಕರಣ / ವೈವಿಧ್ಯೀಕರಣ ಘಟಕಗಳಿಗೆ ರಿಯಾಯಿತಿ ಮತ್ತು ಪ್ರೋತ್ಸಾಹನಗಳನ್ನು ಒದಗಿಸಲು ಅನುಕೂಲವಾಗುವಂತೆ ಸರ್ಕಾರದ ಆದೇಶ ಸಂಖ್ಯೆ: ವಾಕೈ 115 ಜಕೈಇ 2017, ದಿನಾಂಕ:04.11.2019 ರನ್ವಯ ನೂತನ ಜವಳಿ ಮತ್ತು ಸಿದ್ಧ ಉಡುಪು ನೀತಿ 2019-24ನ್ನು ಜಾರಿಗೆ ಬಂದಿದ್ದು, ಈ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ/ ವಿಕಲಚೇತನರು/ ಮಾಜಿ ಸೈನಿಕರು/ ಮಹಿಳೆಯರು/ ಅಲ್ಪಸಂಖ್ಯಾತರು ಫಲಾನುಭವಿಗಳಿಗೆ ಹೆಚ್ಚುವರಿಯಾಗಿ ಸಾಲಾಧಾರಿತ ಬಂಡವಾಳ ಸಹಾಯಧನ ಶೇ.5 ರಷ್ಟು ನೀಡುವ ಅವಕಾಶ ಇರುತ್ತದೆ. |
| (ಆ) | ಪ್ರಸ್ತುತ ಅಥವಾ ಮುಂಬರುವ ವರ್ಷಗಳಲ್ಲಿ ಕೈಮಗ್ಗ ಉತ್ಪಾದನೆಗೆ ಪ್ರೋತ್ಸಾಹಿಸುವ ಯಾವುದಾದರೂ ನೂತನ ಯೋಜನೆ ಜಾರಿಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು) | ಪ್ರಸ್ತುತ ಕೈಮಗ್ಗ ಉತ್ಪಾದನೆಗೆ ಪ್ರೋತ್ಸಾಹಿಸಲು ಈ ಕೆಳಕಂಡ ನೂತನ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ವಿವರ ಇಂತಿದೆ:-<br>• ನೇಕಾರರಿಗೆ ನೇಕಾರಿಕೆ ಉದ್ದೇಶಕ್ಕಾಗಿ ಎದುರಿಸುತ್ತಿರುವ ಬಂಡವಾಳ ಕೊರತೆಯನ್ನು ನೀಗಿಸಲು ರಾಜ್ಯದ ಸಹಕಾರಿ ಮತ್ತು ವಾಣಿಜ್ಯ ಬ್ಯಾಂಕ್‌ಗಳ ಮೂಲಕ ಪಡೆಯುವ ಸಾಲದ ಮೇಲೆ ಶೇ.8 ರ ಬಡ್ಡಿ ಸಹಾಯಧನ ಯೋಜನೆ.<br>• ರಾಜ್ಯದಲ್ಲಿನ ಕೈಮಗ್ಗ ನೇಕಾರಿಕೆ ಹಾಗೂ ಇತರೆ ಕೈಮಗ್ಗ ಚಟುವಟಿಕೆಗಳನ್ನು ನಡೆಸುವ ಕೈಮಗ್ಗ ನೇಕಾರರಿಗೆ "ನೇಕಾರ ಸಮ್ಮಾನ್ ಯೋಜನೆ" ಯಡಿಯಲ್ಲಿ ರೂ.2,000/-ಗಳ ವಾರ್ಷಿಕ ಆರ್ಥಿಕ ನೆರವನ್ನು ನೀಡಲಾಗುತ್ತಿದ್ದು, 2022-23ನೇ ಸಾಲಿಗೆ ಇದನ್ನು ರೂ.5,000/-ಗಳಿಗೆ ಹೆಚ್ಚಿಸಲಾಗಿದೆ.<br>• ನೋಂದಾಯಿತ ನೇಕಾರರ ಮಕ್ಕಳಿಗೆ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ.<br>• ಕೈಮಗ್ಗ ನೇಕಾರರಿಗೆ ಹೊಸ ವಿನ್ಯಾಸಗಳನ್ನು ರೂಪಿಸಲು ಹಾಗೂ ಉತ್ಪನ್ನಗಳ ಬೇಡಿಕೆಯಿಂದ ಆದಾಯ ಹೆಚ್ಚಿಸಲು ಉತ್ತರ ಕರ್ನಾಟಕ ಭಾಗದಲ್ಲಿ "ಹ್ಯಾಂಡ್‌ಲೂಮ್ಸ್ ಡಿಸೈನ್ ಸ್ಟುಡಿಯೋ" ವನ್ನು ಖಾಸಗಿ-ಸಹಭಾಗಿತ್ವದಲ್ಲಿ ಸ್ಥಾಪಿಸುವ ಸಲುವಾಗಿ ವಿಸ್ತೃತ ಯೋಜನಾ ವರದಿ(DPR) ತಯಾರಿಸಲಾಗುತ್ತಿದೆ. |

**ಸಂಖ್ಯೆ: CI 233 JAKE 2022**

(ಶಂಕರ ಬ ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಸಕ್ಕರೆ ಹಾಗೂ ಕಬ್ಬು ಅಭಿವೃದ್ಧಿ ಸಚಿವರು

Scanned with CamScanner